ಸಂಯೋಜಿಸಲಾಗಿದೆ ಈ ನಮಿತಿ ಇಂತಹ ಪ್ರಕರಣಗಳ ಜಾತಿ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುತ್ತದೆ

(12) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 7ರ ಅಡಿ ಈ ದೌರ್ಜನ್ಯ ಪ್ರಕರಣಗಳನ್ನು ತನಿಖೆ ಮಾಡಲು ಆರಕ್ಷಕ ಉಪಾಧೀಕ್ಷಕರ ದರ್ಜೆಯ ಅಧಿಕಾರಿಗಳನ್ನು ನೇಮಕ ಮಾಡಲಾಗುತ್ತದೆ ಅವರು, ಈ ಪ್ರಕರಣಗಳಲ್ಲಿ ತನಿಖೆಯನ್ನು 30 ದಿವಸಗಳಲ್ಲಿ ಮುಗಿಸಲು ಸುತ್ತೋಲೆಗಳನ್ನು ನೀಡಲಾಗಿರುತ್ತದೆ

ಇ) ನೀಡಲಾಗಿದೆ

ಈ)1) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 12ರ ರೀತ್ಯಾ ನೊಂದವರಿಗೆ ಪರಿಹಾರ ಧನ ನೀಡುವುದು ಜೊತೆಗೆ ಇನ್ನಿತರ ಸಹಾಯ ಮತ್ತು ಪುನರ್ ವಸತಿ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ

2) ಸ್ಥಳೀಯ ಪೊಲೀಸರು ಮೇಲಿಂದ ಮೇಲೆ ದಲಿತರ ಕಾಲೋನಿಗಳಿಗೆ ಭೇಟಿ ನೀಡಿ ಅವರ ಕುಂದುಕೊರತೆಗಳನ್ನು ಆಲಿಸುತ್ತಿದ್ದಾರೆ

3) ಪೊಲೀಸ್ ಠಾಣೆ/ವ್ಯತ್ತಾಧಿಕಾರಿ/ಜಿಲ್ಲಾ ಆರಕ್ಷಕ ಅಧೀಕ್ಷಕರ ಮಟ್ಟದಲ್ಲಿ ಮೇಲಿಂದ ಮೇಲೆ ಶಾಂತಿ ಸಭೆ ನಡೆಸಲಾಗುತ್ತಿದೆ

4) ಜಿಲ್ಲಾ ಮ್ಯಾಜಿಸ್ಟ್ರೇಟ್ ನೇತೃತ್ವದಲ್ಲಿ ನಿಯಮ 17ರ ಪ್ರಕಾರ ಡಿಸ್ಟ್ರಿಕ್ಟ್ ಲೆವೆಲ್ ವಿಜಿಲೆನ್ಸ್ ಅಂಡ್ ಮಾನಿಟರಿಂಗ್ ಕಮಿಟಿ ಸಂಯೋಜಿಸಲಾಗಿದೆ

ಉ) 1) ದಲಿತರ ಮೇಲೆ ದೌರ್ಜನ್ಯವೆಸಗಿದವರ ಮೇಲೆ ಕಾನೂನಿನ ರೀತ್ಯಾ ಐಪಿಸಿ ಕಲಂ ಜೊತೆಗೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆ, 1989ನ್ನು ಸಹ ಅಳವಡಿಸಿ ಪ್ರಕರಣ ದಾಖಲು ಮಾಡಲಾಗುತ್ತದೆ

2) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 7ರಡಿಯಲ್ಲಿ ಪ್ರಕರಣವನ್ನು ತನಿಖೆ ಮಾಡಲು ಆರಕ್ಷಕ ಉಪಾಧೀಕ್ಷಕರ ದರ್ಜೆಯ ಅಧಿಕಾರಿಗಳನ್ನು ನೇಮಕ ಮಾಡಲಾಗುತ್ತದೆ ಇಂತಹ ಪ್ರಕರಣಗಳಲ್ಲಿ ತನಿಖೆ ಮಾಡಿ 30 ದಿನಗಳೊಳಗಾಗಿ ದೋಷಾರೋಪಣೆ ಪಟ್ಟಿಯನ್ನು ಸಂಬಂಧಪಟ್ಟ ನ್ಯಾಯಾಲಯಕ್ಕೆ ಸಲ್ಲಿಸಲಾಗುತ್ತದೆ

3) ಅಪರಾಧಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ಒಪ್ಪಿಸಲಾಗುತ್ತದೆ

903(582) ಡಾ ಮಹದೇವಪ್ಪ ಹೆಚ್ ಸಿ (ಟಿ ನರಸೀಪುರ) ಮಾನ್ಯ ಒಳಾಡಳಿತ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ

ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿವಿಧ ಭಾಗಗಳಲ್ಲಿ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಪ್ರತಿಮೆಗಳಿಗೆ ವದೇ ಪದೇ ಅಪಮಾನವೆಸಗುತ್ತಿದ್ದರೂ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣಗಳೇನು,

ಆ) ಪ್ರತಿಮೆಗಳಿಗೆ ಅಪಮಾನ ಮಾಡಿದ ಕಿಡಿಗೇಡಿಗಳನ್ನು ಪತ್ತೆ ಮಾಡಲಾಗಿದೆಯೇ,

ಇ) ಹಾಗಿದ್ದಲ್ಲಿ, ಅವರುಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ ಪಿ ಪ್ರಕಾಶ್ (ಒಳಾಡಳಿತ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು)

ಅ) ಪ್ರಕರಣಗಳು ವರದಿಯಾದಾಗ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ ಮತ್ತು ಅವುಗಳು ಮರುಕಳಿಸದಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ

ಆ) ಪತ್ತೆ ಮಾಡಲಾಗಿದೆ

ಇ) ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದು, ಪ್ರಕರಣಗಳು ನ್ಯಾಯಾಲಯದ ವಿಚಾರಣೆಯಲ್ಲಿರುತ್ತವೆ

904(850) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಗೆ ಬರುವ ಜಿಲ್ಲೆಗಳು ಯಾವುವು,

ಆ) ಈ ಜಿಲ್ಲೆಗಳಿಗೆ ಸಂಚರಿಸುತ್ತಿರುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಸೇರಿದ ಬಸ್ಸುಗಳು ಹಾಗೂ ಬಾಡಿಗೆ ಆಧಾರದ ಮೇಲೆ ಪಡೆದುಕೊಂಡಿರುವ ಬಸ್ಸುಗಳ ಸಂಖ್ಯೆ ಎಷ್ಟು,

ಇ) ಇವುಗಳಿಗೆ ಪ್ರತಿ ಕಿ ಮೀ ಗೆ ನೀಡುವ ಬಾಡಿಗೆ ದರವೆಷ್ಟು,

ಈ) ಕಳೆದ ಒಂದು ವರ್ಷದಿಂದ ವಾವತಿ ಮಾಡಲಾಗಿರುವ ಹಣವೆಷ್ಟು, ಇದಕ್ಕಾಗಿ ಬಾಡಿಗೆ ಪಡೆಯಲಾಗಿರುವ ಬಸ್ಸುಗಳ ಮಾಲೀಕರ ವಿವರಗಳನ್ನು ಒದಗಿಸುವುದು,

ಉ) ನಿಯಮಗಳ ಪ್ರಕಾರ 75 ಲಕ್ಷ ಕಿಮೀ ಕ್ರಮಿಸಿದ ಬಸ್ಸುಗಳನ್ನು ರದ್ದುಪಡಿಸಬೇಕೆಂದಿರುವುದು ನಿಜವಲ್ಲವೆ, ಈ ಬಸ್ಸುಗಳು ಎಷ್ಟು ಕಿ ಮೀ